sdmimd

**ANDOLANA**

**Date:** Wednesday, 8th Oct 2014 **Page No.10**

**Edition:** Mysore **Language:** Kannada

# ಔದ್ಯೋಗಿಕ ಕ್ಷೇತ್ರಗಳ ಜ್ಞಾನ ಪಡೆಯಿರಿ

## ಕೈಗಾರಿಕಾ-ಶೈಕ್ಷಣಿಕ ಸಂಪರ್ಕ ಸಮ್ಮೇಳನದಲ್ಲಿ ಕ್ರಿಷ್ ಗಣೇಶನ್



**ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಕೈಗಾರಿಕಾ ಮತ್ತು ಶೈಕ್ಷಣಿಕ ಸಂಪರ್ಕ ಸಮ್ಮೇಳನದಲ್ಲಿ ಪಾಲ್ಗೊಂಡಿರುವ ವಿದ್ಯಾರ್ಥಿಗಳನ್ನು ಚಿತ್ರದಲ್ಲಿ ಕಾಣಬಹುದು.**

ಮೈಸೂರು,ಅ.೭-ವಿದ್ಯಾರ್ಥಿಗಳು ಕೇವಲ ಪಠ್ಯ ಪುಸ್ತಕಗಳಿಗಷ್ಟೇ ಸೀಮಿತವಾಗಿರುವುದಲ್ಲ. ಔದ್ಯೋಗಿಕ ಕ್ಷೇತ್ರಗಳ ಕುರಿತಾದ ಜ್ಞಾನವನ್ನೂ ಸಹ ಬೆಳೆಸಿಕೊಳ್ಳಬೇಕು ಎಂದು ವಿಪಿ-ಗ್ಲೋಬಲ್ ಟ್ಯಾಲೆಂಟ್ ಅಕ್ವಿಸಿಶನ್‌ನ ಕೃಷ್ ಗಣೇಶನ್ ಸಲಹೆ ನೀಡಿದರು.

ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಫಾರ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್ (ಎಸ್‌ಡಿ ಎಂಐಎಂ ಡಿ) ಹಾಗೂ ಕಾನ್ಫೆಡರೇಶನ್ ಆಫ್ ಇಂಡಿಯನ್ ಇಂಡಸ್ಟ್ರೀಸ್(ಸಿಐಐ) ಮೈಸೂರು ಶಾಖೆ ಜಂಟಿಯಾಗಿ ಮಂಗಳವಾರ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ್ದ ಕೈಗಾರಿಕಾ ಮತ್ತು ಶೈಕ್ಷಣಿಕ ಸಂಪರ್ಕ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಇಂಜಿನಿಯರಿಂಗ್, ಮೆಡಿಕಲ್ ಯಾವುದನ್ನೇ ಓದಿದರೂ ಆ ಕ್ಷೇತ್ರದ ವ್ಯಾಪ್ತಿಯಲ್ಲಿ ದೊರೆಯುವ ಉದ್ಯೋಗಗಳ ಆಳ-ಅಂತರಾಳದ ಬಗ್ಗೆ ತಿಳಿದುಕೊಳ್ಳಬೇಕು. ಪ್ರಾದೇಶಿಕ ವಿಷಯುಗಳಿಂದ ಹಿಡಿದು ಅಂತಾರಾಷ್ಟ್ರೀಯ ಮಟ್ಟದವರೆಗಿನ ಪ್ರತಿಯೊಂದು ವಿಷಯುವನ್ನೂ ತಿಳಿದುಕೊಂಡಾಗ ಶೀಘ್ರವಾಗಿ ಉದ್ಯೋಗ ಲಭಿಸುತ್ತದೆ. ಹಾಗೆಯೇ ಹಲವು ಕಂಪನಿಗಳಲ್ಲಿ ಅವಕಾಶವೂ ದೊರೆಯುತ್ತದೆ ಎಂದರು.

ಇಂದಿನ ವಿಜ್ಞಾನ ಮತ್ತು ತಂತ್ರಜ್ಞಾನ ಶರವೇಗದಲ್ಲಿ ಬೆಳೆಯುತ್ತಿದ್ದು, ಅದಕ್ಕೆ ತಕ್ಕಂತೆ ಜನರು ಕೂಡ ತಂತ್ರಜ್ಞಾನಕ್ಕೆ ಒಗ್ಗಿಕೊಳ್ಳುತ್ತಿದ್ದಾರೆ. ಹೀಗಿರುವಾಗ ನಾವು ವಿಪುಲ ಅವಕಾಶವಿರುವ ಕ್ಷೇತ್ರಗಳನ್ನು ಆಯ್ಕೆ ಮಾಡಿಕೊಳ್ಳಬೇಕು. ಹೆಚ್ಚು ಹೆಚ್ಚು ತಿಳಿದುಕೊಳ್ಳುವ ಮೂಲಕ ವೃತ್ತಿ ಕೌಶಲವನ್ನು ವೃದ್ಧಿಸಿಕೊಳ್ಳಬೇಕು. ಜೊತೆಗೆ ಪ್ರಸ್ತುತ ವಿಷಯಗಳ ಕುರಿತಂತೆ ಹೆಚ್ಚೆಚ್ಚು ಚರ್ಚೆಗಳನ್ನು ನಡೆಸಬೇಕು ಎಂದು ಅವರು ಹೇಳಿದರು.

ಸಫ್ರನ್ ಇಂಜಿನಿಯರಿಂಗ್ ಸಂಸ್ಥೆಯ ಮಾನವ ಸಂಪನ್ಮೂಲ ಅಧಿಕಾರಿ ಅರುಣ್ ನಾಯರ್ ಮಾತನಾಡಿ, ವಿದ್ಯಾಭ್ಯಾಸ ಮುಗಿದ ನಂತರ ವಿದ್ಯಾರ್ಥಿಗಳು ಅಲ್ಪ ಕಾಲದ ಚಿಂತನೆ ಬಿಟ್ಟು ದೀರ್ಘಕಾಲದ ಚಿಂತನೆ ನಡೆಸಬೇಕು. ಅನಂತರದಲ್ಲಿ ಆಸಕ್ತಿ ಇರುವ ಕ್ಷೇತ್ರಗಳನ್ನು ಆಯ್ಕೆ ಮಾಡಿಕೊಂಡು, ಅದರಲ್ಲಿ ಯಶಸ್ಸು ಕಾಣಬೇಕು ಎಂದು ತಿಳಿ ಹೇಳಿದರು.

ನಗರದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಸೇರಿದಂತೆ ೪೦೦ಕ್ಕೂ ಹೆಚ್ಚು ಮಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನಂತರ ಕೈಗಾರಿಕಾ ಮತ್ತು ಶೈಕ್ಷಣಿಕ ಸಂಪರ್ಕ ಸಮ್ಮೇಳನಕ್ಕೆ ಸಂಬಂಧಿಸಿದಂತೆ ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಎಸ್‌ಡಿಎಂಐಎಂಡಿ ನಿರ್ದೇಶಕ ಡಾ.ಎನ್.ಆರ್. ಪರಶುರಾಮನ್ ಅಧ್ಯಕ್ಷತೆ ವಹಿಸಿದ್ದರು. ಪ್ರೊ.ಎಸ್.ಎನ್. ಪ್ರಸಾದ್ ಮತ್ತಿತರರು ಉಪಸ್ಥಿತರಿದ್ದರು.